## 32. ವಿಧಾನ ಪರಿಷತ್ತಿನ 141ನೇ ಅಧಿವೇಶನದ ಕಾರ್ಯಕಲಾಪಗಳ ಸಂಕ್ಷಿಪ್ತ ವರದಿ

ವಿಧಾನ ಪರಿಷತ್ತಿನ 141ನೇ ಅಧಿವೇಶನದಲ್ಲಿ ನಡೆದಿರುವ ಕಾರ್ಯಕಲಾಪಗಳ ವಿವರವನ್ನು ಸದನಕ್ಕೆ ತಿಳಿಸಲು ಇಚ್ಛಿಸುತ್ತೇನೆ. ಪ್ರಸ್ತುತ ಅಧಿವೇಶನವು ದಿನಾಂಕ:21.09.2020 ರಿಂದ 27.09.2020 ರವರೆಗೆ ಒಟ್ಟು 07 ದಿನಗಳು ಅಂದರೆ, 39.05 ಗಂಟೆ ನಡೆಸಲಾಗಿರುತ್ತದೆ.

ಕಳೆದ ಅಧಿವೇಶನದಿಂದೀಚೆಗೆ ನಿಧನರಾದ 19 ಗಣ್ಯರುಗಳಿಗೆ ಹಾಗೂ ಕೊರೋನಾ ವೈರಸ್ ಕೋವಿಡ್–19ರ ಸೋಂಕಿನಿಂದ ದೇಶ ಹಾಗೂ ರಾಜ್ಯದ ಸಾವಿರಾರು ಜನ, ಗಲ್ವಾನ್ ಕಣಿವೆಯಲ್ಲಿ ಭಾರತ ಹಾಗೂ ಚೀನಾ ಸೇನೆ ನಡುವೆ ನಡೆದ ಸಂಘರ್ಷದಲ್ಲಿ ಹುತಾತ್ಮರಾಗಿರುವ ಭಾರತೀಯ ವೀರ ಸೈನಿಕರಿಗೆ ಹಾಗೂ ಆಗಸ್ಟ್ ಮಾಹೆಯಲ್ಲಿ ಸುರಿದ ಭಾರಿ ಮಳೆ ಹಾಗೂ ಪ್ರವಾಹದಿಂದ ವಿವಿಧ ಭಾಗಗಳಲ್ಲಿ ಮೃತಪಟ್ಟಿರುವವರುಗಳಿಗೆ ಸದನವು ತನ್ನ ಸಂತಾಪವನ್ನು ವ್ಯಕ್ತಪಡಿಸಿತು.

ಕಳೆದ ಅಧಿವೇಶನದಲ್ಲಿ ವರದಿಯನ್ನು ಒಪ್ಪಿಸಿದ ನಂತರ ರಾಷ್ಟ್ರಪತಿಯವರಿಂದ ಹಾಗೂ ರಾಜ್ಯಪಾಲರಿಂದ ಒಪ್ಪಿಗೆ ಪಡೆದ ವಿಧೇಯಕಗಳ ಪಟ್ಟಿಯನ್ನು ಕಾರ್ಯದರ್ಶಿಯವರು ಮಂಡಿಸಿದರು.

ಅರ್ಜಿಗಳ ಸಮಿತಿಯಲ್ಲಿ ಪರಿಶೀಲಿಸಲು ಮೂರು ಅರ್ಜಿಗಳನ್ನು ಸದನಕ್ಕೆ ಒಪ್ಪಿಸಲಾಯಿತು.

ಭಾರತ ಲೆಕ್ಕ ನಿಯಂತ್ರಕರು ಮತ್ತು ಮಹಾಲೆಕ್ಕಪರಿಶೋಧಕರು ನೀಡಿರುವ ಈ ಕೆಳಕಂಡ ವರದಿಗಳನ್ನು ಸದನದ ಮುಂದೆ ಮಂಡಿಸಲಾಯಿತು.

1. 2018–19ನೇ ಸಾಲಿನ ಧನವಿನಿಯೋಗ ಲೆಕ್ಕಗಳು ಮತ್ತು ಹಣಕಾಸು ಲೆಕ್ಕಗಳನ್ನು (ಸಂಪುಟ 1 ಮತ್ತು 2).
2. ಮಾರ್ಚ್ 2019ಕ್ಕೆ ಕೊನೆಗೊಂಡ ವರ್ಷದ ರಾಜ್ಯ ಸರ್ಕಾರದ ಹಣಕಾಸಿನ ವ್ಯವಹಾರಗಳ ಲೆಕ್ಕಪರಿಶೋಧನಾ ವರದಿ ( ಸಂಖ್ಯೆ:1)
3. ಸಂವಿಧಾನದ 74ನೇ ತಿದ್ದುಪಡಿ ಕಾಯ್ದೆಯ ಅನುಷ್ಠಾನದ ಮೇಲಿನ ಕಾರ್ಯ ನಿರ್ವಹಣಾ ಲೆಕ್ಕ ಪರಿಶೋಧನೆ ವರದಿ.

**ಹಾಗೂ**

ಕರ್ನಾಟಕ ರಾಜ್ಯ ಅಲ್ಪಸಂಖ್ಯಾತರ ಆಯೋಗದ ವಿಶೇಷ ವರದಿಯನ್ನು, 2020ನೇ ಸಾಲಿನ ಬಿಬಿಎಂಪಿ ವಿಧೇಯಕವನ್ನು ಪರಿಶೀಲಿಸಲು ರಚಿಸಲಾಗಿರುವ ಜಂಟಿ ಪರಿಶೀಲನಾ ಸಮಿತಿಯ ವಿಶೇಷ ವರದಿಯನ್ನು, 2019–20 ನೇ ಸಾಲಿನ ವಿಧಾನ ಮಂಡಲದ ಸ್ಥಳೀಯ ಸಂಸ್ಥೆಗಳ ಮತ್ತು ಪಂಚಾಯತ್ ರಾಜ್ ಸಂಸ್ಥೆಗಳ ಸಮಿತಿಯ 32ನೇ ವರದಿಯನ್ನು, 2019–20ನೇ ಸಾಲಿನ ಅನುಸೂಚಿತ ಜಾತಿ ಮತ್ತು ಅನುಸೂಚಿತ ಪಂಗಡಗಳ ಕಲ್ಯಾಣ ಸಮಿತಿಯ 3ನೇ ವರದಿಯನ್ನು, 2019–20ನೇ ಸಾಲಿನ ಹಿಂದುಳಿದ ವರ್ಗಗಳ ಮತ್ತು ಅಲ್ಪಸಂಖ್ಯಾತರ ಕಲ್ಯಾಣ ಸಮಿತಿಯ 2ನೇ ವರದಿಯನ್ನು, 2019–20ನೇ ಸಾಲಿನ ಅನುಸೂಚಿತ ಜಾತಿ ಮತ್ತು ಅನುಸೂಚಿತ ಪಂಗಡಗಳ ಕಲ್ಯಾಣ ಸಮಿತಿಯ ವಿಶೇಷ ವರದಿಯನ್ನು, 2019–20ನೇ ಸಾಲಿನ ಸಾರ್ವಜನಿಕ ಲೆಕ್ಕಪತ್ರಗಳ ಸಮಿತಿಯ 4ನೇ ವರದಿಯನ್ನು, ಸದಸ್ಯರುಗಳ ಖಾಸಗಿ ವಿಧೇಯಕಗಳ ಮತ್ತು ನಿರ್ಣಯಗಳ ಸಮಿತಿಯ ಮೊದಲನೇ ವರದಿ ಇವುಗಳನ್ನು ಸದನದಲ್ಲಿ ಮಂಡಿಸಲಾಯಿತು.

2020–21ನೇ ಸಾಲಿನ ಪೂರಕ ಅಂದಾಜುಗಳ (ಮೊದಲನೇ ಕಂತು) ಹಾಗೂ ಸಭೆಯ ಮುಂದಿಡಲಾಗುವ ಕಾಗದ ಪತ್ರಗಳ ನಾಲ್ಕು ಪಟ್ಟಿಗಳನ್ನು ಮಂಡಿಸಲಾಯಿತು.

ರಾಜ್ಯದಲ್ಲಿರುವ ಹಾಗೂ ಬೃಹತ್ ಬೆಂಗಳೂರು ಮಹಾನಗರ ಪಾಲಿಕೆಯ ವ್ಯಾಪ್ತಿಯಲ್ಲಿ ಬರುವ ಕ್ಲಬ್‌ಗಳ ಕಾರ್ಯವೈಖರಿ ಮತ್ತು ಚಟುವಟಿಕೆಗಳನ್ನು ಪರಿಶೀಲಿಸಿ ವರದಿ ನೀಡಲು ರಚಿಸಲಾಗಿರುವ ವಿಶೇಷ ಸದನ ಸಮಿತಿಯು ಹಾಗೂ ಗ್ರಾಮೀಣಾಬಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆಯ ಕುಡಿಯುವ ನೀರು ಮತ್ತು ನೈರ್ಮಲ್ಯ ಕಾರ್ಯಕ್ರಮಕ್ಕೆ ಬಿಡುಗಡೆಯಾದ ಹಣವನ್ನು ಅವ್ಯವಹಾರ ಮಾಡಿರುವ ಸಂಬಂಧ ಪರಿಶೀಲಿಸಿ ವರದಿ ನೀಡಲು ರಚಿಸಲಾಗಿರುವ ವಿಶೇಷ ಸದನ ಸಮಿತಿಯು ವರದಿ ಸಲ್ಲಿಸಲು 6 ತಿಂಗಳ ಕಾಲಾವಕಾಶವನ್ನು ವಿಸ್ತರಿಸುವ ಪ್ರಸ್ತಾವನೆಗೆ ಸದನದ ಒಪ್ಪಿಗೆ ಪಡೆಯಲಾಯಿತು.

2020–2021ನೇ ಸಾಲಿನ ವಿಧಾನ ಮಂಡಲ/ವಿಧಾನ ಪರಿಷತ್ತಿನ ವಿವಿಧ ಸಮಿತಿಗಳಿಗೆ ಹಾಗೂ ಕರ್ನಾಟಕ ರಾಜ್ಯಮುಕ್ತ ವಿಶ್ವವಿದ್ಯಾಲಯ, ಕನ್ನಡ ವಿಶ್ವವಿದ್ಯಾಲಯ (ಹಂಪಿ), ಕರ್ನಾಟಕ ಸಂಸ್ಕೃತ ವಿಶ್ವವಿದ್ಯಾಲಯದ ಸೆನೆಟ್‌ಗಳಿಗೆ ಹಾಗೂ ರಾಜ್ಯ ಗ್ರಂಥಾಲಯ ಪ್ರಾಧಿಕಾರಕ್ಕೆ ಚುನಾವಣೆ ನಡೆಸಲು ದಿನಾಂಕ **22.09.2020** ರಂದು ಚುನಾವಣಾ ಪ್ರಸ್ತಾವವನ್ನು ಸದನದಲ್ಲಿ ಮಂಡಿಸಲಾಯಿತು.

2020–21ನೇ ಸಾಲಿನ ವಿಧಾನ ಮಂಡಲ/ವಿಧಾನ ಪರಿಷತ್ತಿನ ವಿವಿಧ ಸಮಿತಿಗಳಿಗೆ ಚುನಾವಣೆ ನಡೆಸುವ ಬದಲು ಮಾನ್ಯ ಸದಸ್ಯರುಗಳನ್ನು ನಾಮನಿರ್ದೇಶಿಸಲು ಹಾಗೂ ಕರ್ನಾಟಕ ರಾಜ್ಯಮುಕ್ತ ವಿಶ್ವವಿದ್ಯಾಲಯ, ಕನ್ನಡ ವಿಶ್ವವಿದ್ಯಾಲಯ (ಹಂಪಿ), ಕರ್ನಾಟಕ ಸಂಸ್ಕೃತ ವಿಶ್ವವಿದ್ಯಾಲಯದ ಸೆನೆಟ್‌ಗಳಿಗೆ ಹಾಗೂ ರಾಜ್ಯ ಗ್ರಂಥಾಲಯ ಪ್ರಾಧಿಕಾರಕ್ಕೆ ಸದಸ್ಯರನ್ನು ಚುನಾವಣೆ ನಡೆಸುವ ಬದಲು ಮಾನ್ಯ ಸದಸ್ಯರುಗಳನ್ನು ನಾಮನಿರ್ದೇಶಿಸಲು ಮಾನ್ಯ ಸಭಾಪತಿಯವರಿಗೆ ಅಧಿಕಾರ ನೀಡುವ ಪ್ರಸ್ತಾವನೆಯನ್ನು ಮಂಡಿಸಿ ಸದನದ ಸಹಮತಿಯನ್ನು ಪಡೆಯಲಾಯಿತು.

ಗಮನ ಸೆಳೆಯುವ ಸೂಚನೆಯಲ್ಲಿ ಚರ್ಚಿಸಲಾದ **ಗಂಗಾಕಲ್ಯಾಣ ಯೋಜನೆಯಡಿಯಲ್ಲಿ ಕೈಗೊಂಡಿರುವ ಕಾಮಗಾರಿಗಳಲ್ಲಿ ನಡೆದಿರುವ ಅವ್ಯವಹಾರದ ಕುರಿತು ಚರ್ಚಿಸಿ ಸದನದ ಒಪ್ಪಿಗೆ ಪಡೆದು** ವಿಶೇಷ ಸದನ ಸಮಿತಿಯನ್ನು ರಚಿಸಲಾಗಿರುತ್ತದೆ.

“ದಿ ಮೈಸೂರು ಲ್ಯಾಂಪ್ಸ್ ವರ್ಕ್ಸ್ ಲಿಮಿಟೆಡ್ ಸಂಸ್ಥೆ ಹಾಗೂ ಸಂಸ್ಥೆಗೆ ಸೇರಿದ ಸ್ವತ್ತುಗಳನ್ನು ಯಾವುದೇ ಕಂಪನಿ, ಕಾಯ್ದೆಯಲ್ಲಿ ಬರುವ ಸರ್ಕಾರಿ ಸ್ವಾಮ್ಯದ ಉದ್ದಿಮೆ/ಸಂಸ್ಥೆಗಳು ಸೇರಿದಂತೆ ಯಾವುದೇ ವ್ಯಕ್ತಿಗಳಿಗೆ ಪರಭಾರೆ ಮಾಡದಂತೆ ನೇರವಾಗಿ ಸರ್ಕಾರವೇ ತನ್ನ ಅಧೀನಕ್ಕೆ ಪಡೆದು ಆಸ್ಪತ್ರೆ, ಮಕ್ಕಳ ಪಾರ್ಕ್, ಉದ್ಯಾನವನ ಸೇರಿದಂತೆ ಸಾರ್ವಜನಿಕ ಉದ್ದೇಶಕ್ಕೆ ಮಾತ್ರ ಬಳಸತಕ್ಕದ್ದು ಎಂಬ ನಿರ್ಣಯವೊಂದನ್ನು ಸದನದಲ್ಲಿ ಮಂಡಿಸಲಾಯಿತು.

ಪ್ರಸ್ತುತ ಅಧಿವೇಶನದಲ್ಲಿ 1282 ಪ್ರಶ್ನೆಗಳನ್ನು ಸ್ವೀಕರಿಸಿದ್ದು, ಅದರಲ್ಲಿ 120 ಪ್ರಶ್ನೆಗಳನ್ನು ಚುಕ್ಕೆ ಗುರುತಿನ ಪ್ರಶ್ನೆಗಳನ್ನಾಗಿ ಅಂಗೀಕರಿಸಿದ್ದು, ಅವುಗಳ ಪೈಕಿ 27 ಪ್ರಶ್ನೆಗಳಿಗೆ ಸದನದಲ್ಲಿ ಉತ್ತರಿಸಲಾಯಿತು. ದಿನಾಂಕ:23.09.2020 ರಿಂದ 25.09.2020ರವರೆಗಿನ 45 ಚುಕ್ಕೆ ಗುರುತಿನ ಪ್ರಶ್ನೆಗಳ ಪೈಕಿ 42 ಪ್ರಶ್ನೆಗಳಿಗೆ ಹಾಗೂ ಲಿಖಿತ ಮೂಲಕ ಉತ್ತರಿಸುವ ಒಟ್ಟು 1162 ಪ್ರಶ್ನೆಗಳ ಪೈಕಿ 614 ಪ್ರಶ್ನೆಗಳಿಗೆ ಸದನದಲ್ಲಿ ಉತ್ತರವನ್ನು ಮಂಡಿಸಲಾಯಿತು.

ನಿಯಮ 72ರಡಿಯಲ್ಲಿ 83 ಸೂಚನೆಗಳನ್ನು ಸ್ವೀಕರಿಸಿದ್ದು, ಅವುಗಳ ಪೈಕಿ 03 ಸೂಚನೆಗಳು ಸದನದಲ್ಲಿ ಚರ್ಚೆಯಾಗಿರುತ್ತದೆ. 17+6 ಸೂಚನೆಗಳಿಗೆ ಉತ್ತರಗಳನ್ನು ಮಂಡಿಸಲಾಯಿತು.

ನಿಯಮ 330ರಡಿಯಲ್ಲಿ 47 ಸೂಚನೆಗಳನ್ನು ಸ್ವೀಕರಿಸಿದ್ದು, ಅವುಗಳ ಪೈಕಿ 04 ಸೂಚನೆಗಳು ಚರ್ಚೆಯಾಗಿರುತ್ತದೆ. 10 ಸೂಚನೆಗಳಿಗೆ ಉತ್ತರಗಳನ್ನು ಮಂಡಿಸಲಾಯಿತು.

ನಿಯಮ 59ರ ಅಡಿಯಲ್ಲಿ 05 ಸೂಚನೆಗಳನ್ನು ಸ್ವೀಕರಿಸಲಾಗಿದ್ದು, ಅವುಗಳಲ್ಲಿ 2 ಸೂಚನೆಗಳನ್ನು ನಿಯಮ 68ಕ್ಕೆ ಪರಿವರ್ತಿಸಿ ಉತ್ತರಿಸಲಾಯಿತು. ಇನ್ನೆರಡು ಸೂಚನೆಗಳನ್ನು ನಿಯಮ 330ಕ್ಕೆ ಪರಿವರ್ತಿಸಲಾಗಿರುತ್ತದೆ ಹಾಗೂ ಒಂದು ಸೂಚನೆಯನ್ನು ತಡೆಹಿಡಿಯಲಾಯಿತು.

ನಿಯಮ 58ರ (**ಅರ್ಧ ಗಂಟೆ ಚರ್ಚೆ**) ಅಡಿಯಲ್ಲಿ ಚರ್ಚಿಸಲು 01 ಸೂಚನೆಯನ್ನು ಸ್ವೀಕರಿಸಲಾಗಿದ್ದು, ಸದನದಲ್ಲಿ ಚರ್ಚಿಸಲಾಗಿರುತ್ತದೆ.

ಶೂನ್ಯ ವೇಳೆಯ ಒಟ್ಟು 11 ಪ್ರಸ್ತಾವಗಳ ಪೈಕಿ 03 ಪ್ರಸ್ತಾವನೆಗಳಿಗೆ ಸದನದಲ್ಲಿ ಉತ್ತರವನ್ನು ಮಂಡಿಸಲಾಯಿತು.

ವಿಧಾನ ಸಭೆಯಿಂದ ಅಂಗೀಕೃತರೂಪದಲ್ಲಿರುವ 37 ವಿಧೇಯಕಗಳಿಗೆ ವಿಧಾನ ಪರಿಷತ್ತು ತನ್ನ ಸಹಮತಿಯನ್ನು ನೀಡಿರುತ್ತದೆ. ಅವುಗಳಲ್ಲಿ 2 ವಿಧೇಯಕಗಳನ್ನು ತಿದ್ದುಪಡಿಗಳೊಂದಿಗೆ ಅಂಗೀಕರಿಸಿರುತ್ತದೆ ಹಾಗೂ ಮೂರು ವಿಧೇಯಕಗಳನ್ನು ಹಿಂದಕ್ಕೆ ಪಡೆಯಲಾಗಿದೆ. ಒಂದು ವಿಧೇಯಕ ತಿರಸ್ಕೃತವಾಗಿರುತ್ತದೆ.

**ಮಾನ್ಯ ಸಭಾನಾಯಕರು ಹಾಗೂ ವಿರೋಧ ಪಕ್ಷದ ನಾಯಕರು ಮಾತನಾಡಿದ ನಂತರ:–**

ಮಾನ್ಯ ಮುಖ್ಯಮಂತ್ರಿಗಳಿಗೆ, ಮಾನ್ಯ ಉಪ ಮುಖ್ಯಮಂತ್ರಿಗಳಿಗೆ ಸಭಾನಾಯಕರಿಗೆ, ವಿರೋಧ ಪಕ್ಷದ ನಾಯಕರಿಗೆ, ಎಲ್ಲಾ ಮಂತ್ರಿ ವರ್ಗದವರಿಗೆ, ಸರ್ಕಾರದ ಮುಖ್ಯ ಸಚೇತಕರಿಗೆ, ವಿರೋಧ ಪಕ್ಷದ ಮುಖ್ಯಸಚೇತಕರಿಗೆ, ಪತ್ರಿಕಾ ಹಾಗೂ ಮಾಧ್ಯಮ ವರದಿಗಾರರಿಗೆ, ವಿಧಾನ ಪರಿಷತ್ತಿನ ಸಚಿವಾಲಯದ

ಅಧಿಕಾರಿ/ನೌಕರವರ್ಗದವರಿಗೆ ಮತ್ತು ಸರ್ಕಾರದ ಎಲ್ಲಾ ಅಧಿಕಾರಿ/ನೌಕರ ವೃಂದದವರಿಗೆ ಸದನದ ಕಾರ್ಯಕಲಾಪಗಳನ್ನು ಸುಗಮವಾಗಿ ನಡೆಸಲು ಸಹಕರಿಸಿದ್ದಕ್ಕೆ ತುಂಬು ಹೃದಯದ ಧನ್ಯವಾದಗಳನ್ನು ಸಲ್ಲಿಸುತ್ತಾ, **ಸದನವನ್ನು ಅನಿರ್ದಿಷ್ಟಕಾಲದವರೆಗೆ ಮುಂದೂಡುತ್ತಿದ್ದೇನೆ.**